# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 :ಹೆಗ್ಗನಹಳ್ಳಿ

**ದಿನಾಂಕ: 06.08.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಜಯಂತ್‌ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು- ವಾರ್ಡ್ 71 |
| 4 | ಬಿ ಎಸ್ ಗಿರೀಶ್ ಗೌಡ್ರು | ಸದಸ್ಯರು |
| 5 | ನಂದೀಶ್ ಕುಮಾರ್ | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ |
| 6 | ಎನ್ ಜಗದೀಶ್ | ಬೆಸ್ಕಾಂ ಇಲಾಖೆ |
| 7 | ಹೆಚ್ ಮಂಜುನಾಥ್ | ಸದಸ್ಯರು |
| 8 | ಕೆ ಎ ಉಮೇಶ | ಸದಸ್ಯರು |
| 9 | ರಂಗರಾಜು ಕೆ | ಸದಸ್ಯರು |
| 10 | ಸುಮಂಗಳ | ಕಿರಿಯ ಅಭಿಯಂತರರು, ಬೆಸ್ಕಾಂ |
| 11 | ಹೆಚ್ ಎಸ್ ಉಮೇಶ | ಸದಸ್ಯರು |
| 12 | ವೆಂಕಟರಾಜು | ಸದಸ್ಯರು |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಜಯಂತ್‌ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ವಿಷಯ ಸಂಖ್ಯೆ: 1 :- ಬಿ.ಎಬ್ಲ್ಯೂಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ದೂರುಗಳು**

1) ಸದಸ್ಯರಾದ ಶ್ರೀ ಮಂಜುನಾಥ್ ರವರು ಮಾತನಾಡಿ, ಕೆ.ಟಿ.ಜಿ ಮುಖ್ಯರಸ್ತೆಯಲ್ಲಿ ಮಣ್ಣು ಮಿಶ್ರಿತ ನೀರು ಬರುತ್ತಿದ್ದು, ಈ ಬಗ್ಗೆ ಕೂಡಲೇ ಕ್ರಮಕೈಗೊಳ್ಳುವಂತೆ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ ಪ್ರತಿಕ್ರಿಯಿಸಿ ಈ ಬಗ್ಗೆ ಸ್ಥಳ ಪರಿಶೀಲಿಸಿ ಕ್ರಮ ವಹಿಸುವುದಾಗೀ ತಿಳಿಸಿದರು.

2) ಸದಸ್ಯರಾದ ಬಿ ಎಸ್ ಗಿರೀಶ್ ಗೌಡ್ರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ಹಲವು ಕಡೆಗಳಲ್ಲಿ ಸ್ಯಾನಿಟರಿ ಲೇಣ್ ಗಳಿಂದ ತೆಗೆದ ಹೂಳನ್ನು ತೆರವುಗೊಳಿಸಿರುವುದಿಲ್ಲ ಈ ಬಗ್ಗೆ ಕೂಡಲೇ ಕ್ರಮ ವಹಿಸಬೇಕಾಗಿ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ ಪ್ರತಿಕ್ರಿಯಿಸಿ ಇನ್ನು 4-5 ದಿನಗಳೊಳಗಾಗಿ ಹೂಳನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

3) ಸದಸ್ಯರಾದ ಕೆ.ಎ ಉಮೇಶ್ ರವರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ಲಕ್ಷ್ಮಣ ನಗರದ 5ನೇ ಮುಖ್ಯರಸ್ತೆಯಲ್ಲಿ ಒಳಚರಂಡಿ ಬ್ಲಾಕ್ ಆಗಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸಬೇಕಾಗಿ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ ಪ್ರತಿಕ್ರಿಯಿಸಿ ಸ್ಥಳ ಪರಿಶೀಲಿಸಿ ಕ್ರಮ ವಹಿಸುವುದಾಗೀ ತಿಳಿಸಿದರು

- **ವಿಷಯ ಸಂಖ್ಯೆ: 4 :- ವಿವಿಧ ಇಲಾಖೆಗಳಿಗೆ ಸಂಬಂಧ ಪಟ್ಟ ಅಧಿಕಾರಿಗಳು ಸಭೆಗೆ ಗೈರು ಆಗುತ್ತಿರುವ ಬಗ್ಗೆ**

ಸದಸ್ಯರೆಲ್ಲರು ಮಾತನಾಡಿ, ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಕೆಲವು ಅಧಿಕಾರಿಗಳು ಸಭೆಗೆ ಹಾಜರಾಗುತ್ತಿಲ್ಲವಾದ್ದರಿಂದ ಸಾರ್ವಜನಿಕರ ಕುಂದು ಕೊರತೆಗಳನ್ನು ಸದರಿಯವರ ಸಮ್ಮುಖದಲ್ಲಿ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ ಆದ್ದರಿಂದ ಮುಂದಿನ ಸಭೆಗಳಲ್ಲಿ ಎಲ್ಲರೂ ಹಾಜರಾಗುವಂತೆ ಕ್ರಮಮವಹಿಸಲು ಕೋರಿದರು.

ಈ ಬಗ್ಗೆ ನೋಡಲ್ ಅಧಿಕಾರಿಗಳು ಪ್ರತಿಕ್ರಿಯಿಸಿ, ಗೈರು ಆಗುತ್ತಿರುವ ಅಧಿಕಾರಿಗಳಿಗೆ ನೋಟೀಸ್ ನೀಡಲು ಹಾಗೂ ಗೈರಿನ ಸಂಬಂಧ ಸಭೆಯ ನಡವಳಿಯಲ್ಲಿ ದಾಖಲಿಸಲು ಕಾರ್ಯದರ್ಶೀ ಯವರಿಗೆ ಸೂಚಿಸಿದರು.

- **ವಿಷಯ ಸಂಖ್ಯೆ: 5 :- ಲಕ್ಷ್ಮಣನಗರದ 5ನೇ ಮುಖ್ಯ ರಸ್ತೆ & 6ನೇ ಮುಖ್ಯರಸ್ತೆಗಳಲ್ಲಿ ಚಾಚಿಕೊಂಡಿರುವ ಕೊಂಬೆಗಳನ್ನು ಕತ್ತರಿಸುವ ಬಗ್ಗೆ.**

ಸದಸ್ಯರಾದ ಶ್ರೀ ಕೆ.ಎ ಉಮೇಶ್ ರವರು ಮಾತನಾಡಿ, ಲಕ್ಷ್ಮಣನಗರದ 5ನೇ ಮುಖ್ಯರಸ್ತೆ & 6ನೇ ಮುಖ್ಯರಸ್ತೆಯ ಬದಿಗಳಲ್ಲಿ ಬೆಳೆದಿರುವ ಮರಗಳ ರೆಂಬೆ-ಕೊಂಬೆಗಳು ಚಾಚಿಕೊಂಡಿದ್ದು, ಮುಂಜಾಗ್ರತ ಕ್ರಮವಾಗಿ ಇವುಗಳನ್ನು ಕತ್ತರಿಸಲು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಹಾಜರಿದ್ದ ಅರಣ್ಯ ಇಲಾಖೆ ಸಿಬ್ಬಂದಿಗೆ ಸದರಿ ಸಮಸ್ಯೆಯನ್ನು ಪರಿಹರಿಸಲು ಸೂಚಿಸಿದರು.

**ವಿಷಯ ಸಂಖ್ಯೆ: 6 :- ಬಿ ಖಾತೆಗೆ ಸಲ್ಲಿಸಬೇಕಾಗಿರುವ ವಿವರಗಳನ್ನು ಸೂಚನಾ ಫಲಕಗಳಲ್ಲಿ ಅಳವಡಿಸುವ ಬಗ್ಗೆ.**

ಸದಸ್ಯರಾದ ಕೆ.ಎ ಉಮೇಶ್ ರವರು ಮಾತನಾಡಿ, ಈ ಹಿಂದಿನ ಸಭೆಯಲ್ಲಿ ಈಗಾಗಲೇ ಚರ್ಚಿಸಿರುವಂತೆ ಬಿ ಖಾತೆಯನ್ನು ಪಡೆಯಲು ಸಲ್ಲಿಸಬೇಕಾಗಿರುವ ದಾಖಲೆಗಳ ವಿವರಗಳನ್ನು ಕಛೇರಿಯ ಆವರಣದ ಸೂಚನಾ ಫಲಕಗಳಲ್ಲಿ ಕನ್ನಡದಲ್ಲಿ ಅಳವಡಿಸುವಂತೆ ಕೋರಿದರು.

ಇದಕ್ಕೆ ಕಂದಾಯ ವಸೂಲಿಗಾರರಾದ ಮುನಿರಾಜು ರವರು ಮಾತನಾಡಿ, ಬಿ ಖಾತೆಗೆ ಸಲ್ಲಿಸಬೇಕಾಗಿರುವ ದಾಖಲೆಗಳ ಮಾಹಿತಿಯನ್ನು ಕನ್ನಡದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವುದಾಗೀ ತಿಳಿಸಿದರು.

**ವಿಷಯ ಸಂಖ್ಯೆ: 7:-BBMP SAHAYA APP:**

- ಜಯಂತ್ ಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್‌ಕುಮಾರ್‌ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್‌ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ